ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

2019-20ನೇ ಸಾಲಿನಲ್ಲಿ ಕರಾವಳಿ ಅಭಿವೃದ್ದಿ ಪ್ರಾಧಿಕಾರಕ್ಕೆ ಅನುದಾನ ಬಿಡುಗಡೆ ಮಾಡುವ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

733 (686) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) 2019-20ನೇ ಸಾಲಿನಲ್ಲಿ ಕರಾವಳಿ ಅಭಿವೃದ್ದಿ ಪ್ರಾಧಿಕಾರಿಕ್ಕೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ವಿವರ ಒದಗಿಸುವುದು)

(ಆ) 2018-19, 2019-20ರಲ್ಲಿ ಎಷ್ಟು ಹೊಸ ಕಾಮಗಾರಿಗಳನ್ನು ಪ್ರಾಧಿಕಾರದಿಂದ ತೆಗೆದುಕೊಳ್ಳಲಾಗಿದೆ; ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ ; ಬಾಕಿ ಇರುವ ಕಾಮಗಾರಿಗಳು ಎಷ್ಟು ; (ವಿವರ ಒದಗಿಸುವುದು)

(ಇ) ಕರಾವಳಿ ಅಭಿವೃದ್ದಿ ಪ್ರಾಧಿಕಾರಕ್ಕೆ ಪೂರ್ಣಕಾಲಿಕ ಕಾರ್ಯದರ್ಶಿಗಳು ಇಲ್ಲದೆ ಕಾಮಗಾರಿಗಳು ವಿಳಂಬಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಪ್ರಾರಂಭದಿಂದ ಈವರೆಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು; (ಪೂರ್ಣ ವಿವರ ನೀಡುವುದು)

(ಈ) ಪ್ರಾಧಿಕಾರದ ಮೂಲ ಉದ್ದೇಶವನ್ನು ಈಡೇರಿಸದೆ ಪ್ರಾಧಿಕಾರವನ್ನು ಸ್ಥಗಿತಗೊಳಿಸುವುದರ ಬಗ್ಗೆ ಸರ್ಕಾರ ಗಮನಹರಿಸಿದೆಯೇ?